For more job news visit : www.kpscvaani.com

**ಕರ್ನಾಟಕ ಸರ್ಕಾರ**
**ಸಮಾಜ ಕಲ್ಯಾಣ ಇಲಾಖೆ**
# ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರ

---

**ಸಂಖ್ಯೆ**: SWD/IGCCD/0S-04/PC/2025-26

ನಿರ್ದೇಶಕರ ಕಛೇರಿ
ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರ,
ಡಾ.ಬಾಬು ಜಗಜೀವನರಾಮ್ ಸಂಶೋಧನಾ ಸಂಸ್ಥೆ,
ಮಾಗಡಿ ಮುಖ್ಯ ರಸ್ತೆ, ಸುಮನಹಳ್ಳಿ ಜಂಕ್ಷನ್.
ಬೆಂಗಳೂರು.
ದಿನಾಂಕ: 22-07-2025

## ಅಧಿಸೂಚನೆ

**ವಿಷಯ**: 2025-26ನೇ ಸಾಲಿನ ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಪೂರ್ವ-ನೇಮಕಾತಿ Police Constable ಪರೀಕ್ಷಾ ಪೂರ್ವ ತರಬೇತಿ ನೀಡುವ ಸಂಬಂಧ ಕರ್ನಾಟಕ ರಾಜ್ಯದ 04 ಕಂದಾಯ ವಿಭಾಗಗಳಲ್ಲಿ ಪ್ರತ್ಯೇಕವಾಗಿ 60 ದಿನಗಳ ವಸತಿಯುತ ತರಬೇತಿ ನೀಡುವ ಬಗ್ಗೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2025-26 ನೇ ಸಾಲಿನ ಇಂದಿರಾಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಪೂರ್ವ-ನೇಮಕಾತಿ Police Constable ಪರೀಕ್ಷಾ ಪೂರ್ವ ತರಬೇತಿ ನೀಡುವ ಸಂಬಂಧ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲು ಉದ್ದೇಶಿಸಲಾಗಿದೆ.

ಅದರಂತೆ, ತರಬೇತಿ ಅವಧಿ, ತರಬೇತಿ ವಿವರ, ಅರ್ಜಿ ಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ವಿವರಗಳು ಈ ಕೆಳಕಂಡಂತಿದೆ.

| ಕ್ರ. ಸಂ. | ವಿವರ | |
|---|---|---|
| 01. | **ತರಬೇತಿ ವಿವರ** | ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ 04 ಕಂದಾಯ ವಿಭಾಗಗಳಲ್ಲಿ ಪ್ರತ್ಯೇಕವಾಗಿ 60 ದಿನಗಳ ವಸತಿಯುತ ಪೂರ್ವ-ನೇಮಕಾತಿ Police Constable ಪರೀಕ್ಷಾ ಪೂರ್ವ ತರಬೇತಿ.<br>ಈ ಕೆಳಗಿನ ತರಬೇತಿಗಳು ಒಳಗೊಂಡಿದೆ:<br>1. ದೈಹಿಕ ಚಟುವಟಿಕೆಗಳು - ಓಟ, ಎತ್ತರ ಜಿಗಿತ, ಶಾಟ್‌ಪುಟ್<br>2. ಡ್ರಿಲ್<br>3. ತರಗತಿಯ ತರಬೇತಿ<br>4. ದಿನಕ್ಕೆ 3 ಬಾರಿ ಊಟದ ವ್ಯವಸ್ಥೆ |
| 02. | **ವಯಸ್ಸು** | • ಕನಿಷ್ಠ 18 ವರ್ಷ<br>• ಗರಿಷ್ಠ 26 ವರ್ಷ |

For more job news visit : www.kpscvaani.com

| | | |
|---|---|---|
| 03. | **ವಿದ್ಯಾರ್ಹತೆ** | ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಮಾನ್ಯತೆ ಪಡೆದ ಅಂಗೀಕೃತ ಪದವಿ ಪೂರ್ವ ಕಾಲೇಜಿನಲ್ಲಿ ದ್ವಿತೀಯ ಪಿ.ಯು.ಸಿ ಉತ್ತೀರ್ಣರಾಗಿರಬೇಕು. |
| 04. | **ಅಭ್ಯರ್ಥಿಯ ಸಾಮಾನ್ಯ ಅರ್ಹತೆ** | 1. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು<br>2. ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು<br>3. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ನಿಗಧಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು. |
| 05. | **ವಾರ್ಷಿಕ ಆದಾಯ** | ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ ರೂ. 5.00 ಲಕ್ಷ ಮೀರಿರಬಾರದು |
| 06. | **ಎತ್ತರ** | ಪುರುಷರಿಗೆ ಕನಿಷ್ಠ 168 ಸೆಂ.ಮೀ<br>ಮಹಿಳೆಯರಿಗೆ ಕನಿಷ್ಠ 157 ಸೆಂ.ಮೀ |
| 07. | **ತೂಕ (ಮಹಿಳೆಯರಿಗೆ)** | ಕನಿಷ್ಠ 45 ಕೆ.ಜಿ |
| 08. | **ಎದೆ (ಪುರುಷರಿಗೆ)** | ಕನಿಷ್ಠ 86 ಸೆಂ.ಮೀ |
| 09. | **ಆಯ್ಕೆ ವಿಧಾನ** | ದೈಹಿಕ ಅರ್ಹತೆಯ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. |
| 10. | **ಅರ್ಜಿ ಸಲ್ಲಿಸುವ ವೆಬ್ ಸೈಟ್ ವಿಳಾಸ** | https://igccd.karnataka.gov.in |
| 11. | **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ** | 31-08-2025 |

**ತರಬೇತಿಯ ನಿಯಮಗಳು ಮತ್ತು ಷರತ್ತುಗಳು:**

- ಅರ್ಜಿ ಸಲ್ಲಿಸುವ ಪ್ರಕ್ರಿಯೆಯಲ್ಲಿ ಅಭ್ಯರ್ಥಿಯು ಆಯ್ಕೆ ಮಾಡಿದ ವಿಭಾಗದ ಪ್ರಕಾರ ತರಬೇತಿ ವಿಭಾಗವನ್ನು ನಿಯೋಜಿಸಲಾಗುತ್ತದೆ.
- ಅಭ್ಯರ್ಥಿಯ ತರಬೇತಿ ವಿಭಾಗವನ್ನು ಬದಲಾಯಿಸವ ಹಕ್ಕುಗಳನ್ನು ಇಲಾಖೆಯು ಹೊಂದಿರುತ್ತದೆ.
- ಅಭ್ಯರ್ಥಿಯು ತರಬೇತಿಯ ಎಲ್ಲಾ ನಿಯಮಗಳು ಮತ್ತು ನಿಬಂಧನೆಗಳನ್ನು ಪಾಲಿಸಬೇಕು ಮತ್ತು ತರಬೇತಿಯ ವೇಳಾಪಟ್ಟಿಯನ್ನು ನಿರ್ವಹಿಸಬೇಕು. ತರಬೇತಿಯ ನಿಯಮಗಳನ್ನು ಪಾಲಿಸದಿದ್ದರ ಅಭ್ಯರ್ಥಿಯನ್ನು ಅನರ್ಹಗೊಳಿಸುವ ಹಕ್ಕನ್ನು ಇಲಾಖೆಯು ಹೊಂದಿರುತ್ತದ.
- ತರಬೇತಿ ಸಂಸ್ಥೆ, ಅಧ್ಯಾಪಕ ಸದಸ್ಯರು ಅಥವಾ ಬೋಧಕರ ಕಡೆಗೆ ಅವಿಧೇಯತೆ ಅಥವಾ ದುರ್ನಡತೆ ಪ್ರದರ್ಶಿಸುವ ಯಾವುದೇ ಅಭ್ಯರ್ಥಿಯನ್ನು ತಕ್ಷಣವೇ ಅನರ್ಹಗೊಳಿಸಲಾಗುತ್ತದೆ.
- ಅಭ್ಯರ್ಥಿಯು 60 ದಿನಗಳ ಪೂರ್ಣ ತರಬೇತಿಯನ್ನು ಪೂರ್ಣಗೊಳಿಸಬೇಕು ಹಾಗೂ ತರಬೇತಿ ಆವರಣದಿಂದ ಹೊರಗೆ ಹೋಗಲು ಅವಕಾಶವಿರುದಿಲ್ಲ.
- ತರಬೇತಿ ಅವಧಿಯಲ್ಲಿ ಯಾವುದೇ ಗಾಯಗಳು ಅಥವಾ ಅಹಿತಕರ ಘಟನೆಗಳು ಸಂಭವಿಸಿದಲ್ಲಿ, ತರಬೇತಿ ಸಂಸ್ಥೆ ಅಥವಾ ಇಲಾಖೆಯು ಜವಾಬ್ದಾರರಾಗಿರುವುದಿಲ್ಲ.

For more job news visit : www.kpscvaani.com

- ಇಲಾಖೆಯ ಮಾರ್ಗಸೂಚಿಗಳ ಪ್ರಕಾರ ತರಬೇತಿ ಸಂಸ್ಥೆಯು ಪುಸ್ತಕಗಳನ್ನು ನೀಡಲಾಗುವುದು.
- ಇಲಾಖಾ ವೆಬ್-ಸೈಟ್‌ನಲ್ಲಿ ಕಾಲಕಾಲಕ್ಕೆ ನೀಡಲಾಗಿರುವ ಮಾಹಿತಿಯನ್ನು ಅಧಿಕೃತ ಹಾಗೂ ಅಂತಿಮಮವಾಗಿರುತ್ತದೆ.
- ಇಲಾಖೆಯಿಂದ ಯಾವುದೇ ಪತ್ರ ವ್ಯವಹಾರವನ್ನು ನಡೆಸಲಾಗುವುದಿಲ್ಲವಾದ್ದರಿಂದ, ಇಲಾಖಾ ವೆಬ್‌ಸೈಟ್‌ನ್ನು ಕಾಲಕಾಲಕ್ಕೆ ವೀಕ್ಷಿಸತಕ್ಕದ್ದು ಹಾಗೂ ವೆಬ್‌ಸೈಟ್‌ನಲ್ಲಿ ನೀಡಲಾಗುವ ಮಾಹಿತಿಯನ್ನು ಕಡ್ಡಾಯವಾಗಿ ಅನುಸರಿಸುವುದು.
- ಅಭ್ಯರ್ಥಿಯ ಮಾಹಿತಿ ಕಾರಣದಿಂದ ಉಂಟಾಗಬಹುದಾದ ಲೋಪಗಳಿಗೆ ಸಂಬಂಧಪಟ್ಟ ಅಭ್ಯರ್ಥಿಯೇ ಕಾರಣರಾಗಿರುತ್ತಾರೆ.

ನಿರ್ದೇಶಕರು,
ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರ,
ಬೆಂಗಳೂರು.